# ಕರ್ನಾಟಕ ಸರ್ಕಾರದ ನಡವಳಿಗಳು

**ವಿಷಯ:** ಸುವರ್ಣ ಗ್ರಾಮೋದಯ ಯೋಜನೆಯಡಿ ಆಯ್ಕೆಯಾಗಿರುವ ಗ್ರಾಮಗಳಲ್ಲಿನ ಕಾರ್ಯಕ್ರಮಗಳ ಅನುಷ್ಠಾನಕ್ಕಾಗಿ 2013-14ನೇ ಸಾಲಿನಲ್ಲಿ 2ನೇ ಕಂತಿನ ಅನುದಾನ ಬಿಡುಗಡೆ ಕುರಿತು.

**ಉಲ್ಲೇಖ:**
1. ಸರ್ಕಾರಿ ಆದೇಶ ಸಂಖ್ಯೆ:ಗ್ರಾಅಪ:58:ಎಎಫ್‌ಎನ್:2012, ದಿ:01.04.2013.
2. ಸರ್ಕಾರಿ ಆದೇಶ ಸಂಖ್ಯೆ:ಗ್ರಾಅಪ:82:ಸುಗ್ರಾಯೋ:2008, ದಿ:03.10.2008.
3. ಸರ್ಕಾರಿ ಆದೇಶ ಸಂಖ್ಯೆ:ಗ್ರಾಅಪ:101:ಸುಗ್ರಾಯೋ:2008, ದಿ:01.01.2009.
4. ಸರ್ಕಾರಿ ಆದೇಶ ಸಂಖ್ಯೆ:ಗ್ರಾಅಪ:55:ಸುಗ್ರಾಯೋ:2009, ದಿ:15.09.2009.
5. ಸರ್ಕಾರಿ ಆದೇಶ ಸಂಖ್ಯೆ:ಗ್ರಾಅಪ:29:ಸುಗ್ರಾಯೋ:2012, ದಿ:29.06.2012.
6. ಸರ್ಕಾರಿ ಆದೇಶ ಸಂಖ್ಯೆ:ಗ್ರಾಅಪ:35:ಸುಗ್ರಾಯೋ:2013, ದಿ:16.05.2013.

ಪ್ರಸ್ತಾವನೆ:

ಉಲ್ಲೇಖ(1)ರ ಆದೇಶದಲ್ಲಿ ಸುವರ್ಣ ಗ್ರಾಮೋದಯ ಯೋಜನೆಯನ್ನು 2013-14ನೇ ಸಾಲಿನಲ್ಲಿ ಮುಂದುವರಿಸಲಾಗಿದೆ. ಈ ಯೋಜನೆಗಾಗಿ 2013-14ನೇ ಸಾಲಿನ ಜುಲೈ ಆಯವ್ಯಯದಲ್ಲಿ **ರೂ.10967.06** ಲಕ್ಷಗಳ ಅನುದಾನವನ್ನು ನಿಗದಿಪಡಿಸಲಾಗಿದೆ. ಈ ಪೈಕಿ ಬಂಡವಾಳ ವೆಚ್ಚಗಳು, ವಿಶೇಷ ಘಟಕ ಯೋಜನೆ ಮತ್ತು ಗಿರಿಜನ ಉಪಯೋಜನೆಯ ಲೆಕ್ಕ ಶೀರ್ಷಿಕೆಯಡಿ ಕ್ರಮವಾಗಿ **ರೂ.5667.06, ರೂ.4300.00 ಮತ್ತು ರೂ.1000.00 ಲಕ್ಷಗಳು** ನಿಗದಿಯಾಗಿರುತ್ತದೆ. ವಿಶೇಷ ಘಟಕ ಯೋಜನೆ ಮತ್ತು ಗಿರಿಜನ ಉಪ ಯೋಜನೆಯಡಿ ಒದಗಿಸಿರುವ ಅನುದಾನವನ್ನು ಜಿಲ್ಲೆಗಳಿಗೆ/ಗ್ರಾಮಗಳಿಗೆ ಹಂಚಿಕೆಯಾಗಿರುವ ಅನುದಾನದಲ್ಲಿ ಆಯಾ ಲೆಕ್ಕ ಶೀರ್ಷಿಕೆಯಡಿ ಕಡ್ಡಾಯವಾಗಿ ಭರಿಸತಕ್ಕದ್ದು. ಸುವರ್ಣ ಗ್ರಾಮೋದಯ ಯೋಜನೆಯಡಿ ಆಯ್ಕೆಯಾಗಿರುವ ಗ್ರಾಮಗಳ ಕಾರ್ಯಕ್ರಮ ಅನುಷ್ಠಾನಕ್ಕಾಗಿ 6 ಜಿಲ್ಲೆಗಳಿಗೆ ಅವುಗಳ 2013ರ ಸೆಪ್ಟೆಂಬರ್ ಅಂತ್ಯದವರೆಗಿನ ಸಾಧನೆ, ಉಳಿದಿರುವ ಅನುದಾನ ಮತ್ತು ಯೋಜನೆಯ ಮುಂದುವರಿಕೆಗಾಗಿ ಬೇಕಾಗಿರುವ ಅನುದಾನಗಳ ಬೇಡಿಕೆಯನ್ನು ಆಧರಿಸಿ ಅನುದಾನ ಬಿಡುಗಡೆ ಅಗತ್ಯವಿರುತ್ತದೆ. ಪ್ರಯುಕ್ತ ಈ ಆದೇಶ.

**ಸರ್ಕಾರಿ ಆದೇಶ ಸಂಖ್ಯೆ:ಗ್ರಾಅಪ:35:ಸುಗ್ರಾಯೋ:2013, ಬೆಂಗಳೂರು, ದಿನಾಂಕ:15.10.2013**

ಪ್ರಸ್ತಾವನೆಯಲ್ಲಿ ವಿವರಿಸಿದಂತೆ, ಸುವರ್ಣ ಗ್ರಾಮೋದಯ ಯೋಜನೆ ಅನುಷ್ಠಾನಕ್ಕಾಗಿ ಕೆಳಕಂಡ ಲೆಕ್ಕ ಶೀರ್ಷಿಕೆಗಳಡಿ ರೂ.2467.00 ಲಕ್ಷಗಳನ್ನು (ರೂಪಾಯಿ ಎರಡು ಸಾವಿರದ ನಾಲ್ಕುನೂರ ಅರವತ್ತೇಳು ಲಕ್ಷಗಳು ಮಾತ್ರ) ಅನುಬಂಧದಲ್ಲಿ ವಿವರಿಸಲಾದಂತೆ ರಾಜ್ಯದ 6 ಜಿಲ್ಲಾ ಪಂಚಾಯತ್‌ಗಳಿಗೆ ಬಿಡುಗಡೆ ಮಾಡಲಾಗಿದೆ. ಸದರಿ ಅನುದಾನವನ್ನು ಈ ಕೆಳಕಂಡ ಲೆಕ್ಕ ಶೀರ್ಷಿಕೆಗಳಡಿ ಭರಿಸತಕ್ಕದ್ದು.

1. 4215-02-800-0-02-132 (ಯೋಜನೆ) ಬಂಡವಾಳ ವೆಚ್ಚಗಳು – 1556.67 ಲಕ್ಷಗಳು
2. 4215-02-800-0-02-422 (ಯೋಜನೆ) ವಿಶೇಷ ಘಟಕ ಯೋಜನೆ – 622.18 ಲಕ್ಷಗಳು
3. 4215-02-800-0-02-423 (ಯೋಜನೆ) ಗಿರಿಜನ ಉಪ ಯೋಜನೆ – 288.15 ಲಕ್ಷಗಳು

**ಒಟ್ಟು – 2467.00 ಲಕ್ಷಗಳು**

ಈ ಆದೇಶದಲ್ಲಿ ಬಿಡುಗಡೆ ಮಾಡಿರುವ ಅನುದಾನವನ್ನು ಸುವರ್ಣ ಗ್ರಾಮೋದಯ ಯೋಜನೆಯಡಿ ಆಯ್ಕೆ ಮಾಡಿದ ಗ್ರಾಮಗಳ ಅನುಮೋದಿತ ಗ್ರಾಮಾಭಿವೃದ್ಧಿ ಯೋಜನೆಯ ಕಾಮಗಾರಿಗಳ ಅನುಷ್ಠಾನಕ್ಕಾಗಿ ಮಾತ್ರ ವಿನಿಯೋಗಿಸುವುದು.

ವಿಶೇಷ ಘಟಕ ಯೋಜನೆ ಮತ್ತು ಗಿರಿಜನ ಉಪ ಯೋಜನೆಯಡಿ ಒದಗಿಸಿರುವ ಅನುದಾನವನ್ನು ಜಿಲ್ಲೆಗಳಿಗೆ/ಗ್ರಾಮಗಳಿಗೆ ಹಂಚಿಕೆಯಾಗಿರುವ ಅನುದಾನದಲ್ಲಿ ಆಯಾ ಲೆಕ್ಕ ಶೀರ್ಷಿಕೆಯಡಿ ಕಡ್ಡಾಯವಾಗಿ ಭರಿಸತಕ್ಕದ್ದು. ವಿಶೇಷ ಘಟಕ ಯೋಜನೆ ಮತ್ತು ಗಿರಿಜನ ಉಪ ಯೋಜನೆಯಡಿ ಸಾಧಿಸಿದ ಆರ್ಥಿಕ ಮತ್ತು ಭೌತಿಕ ಪ್ರಗತಿಯ ವಿವರವಾದ ವರದಿಯನ್ನು ಪ್ರತ್ಯೇಕವಾಗಿ ಪ್ರತಿ ಮಾಹೆ ಸರ್ಕಾರಕ್ಕೆ ಸಲ್ಲಿಸುವುದು.

ಈ ಅನುದಾನ ಬಿಡುಗಡೆ ಬಗ್ಗೆ ಇಲಾಖೆಯ ಆರ್ಥಿಕ ಇಲಾಖೆ (ವೆಚ್ಚ-5)ರವರ ಟಿಪ್ಪಣಿ ಸಂಖ್ಯೆ.ಆಇ 328 ವೆಚ್ಚ-6/2013 ಮತ್ತು ಗ್ರಾಅಪ:35:ಸುಗ್ರಾಯೋ:2013, ದಿನಾಂಕ:09.10.2013ರಲ್ಲಿ ನೀಡಿದ ಸಹಮತಿ ಮೇರೆಗೆ ಈ ಆದೇಶವನ್ನು ಹೊರಡಿಸಲಾಗಿದೆ.

ಕರ್ನಾಟಕ ರಾಜ್ಯಪಾಲರ ಆದೇಶಾನುಸಾರ
ಮತ್ತು ಅವರ ಹೆಸರಿನಲ್ಲಿ

15/X/13

(ಬೂವನಹಳ್ಳಿನಾಗರಾಜ್)
ನಿರ್ದೇಶಕರು(ಸು.ಗ್ರಾ.ಯೋ.) ಹಾಗೂ
ಸರ್ಕಾರದ ಪದನಿಮಿತ್ತ ಉಪ ಕಾರ್ಯದರ್ಶಿ,
ಗ್ರಾಮೀಣಾಭಿವೃದ್ಧಿ ಮತ್ತು ಪಂ.ರಾಜ್ ಇಲಾಖೆ

ಪ್ರತಿಗಳು:

1. ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಗಳು/ಮುಖ್ಯ ಲೆಕ್ಕಾಧಿಕಾರಿಗಳು, ಬೆಳಗಾವಿ, ತುಮಕೂರು, ಹಾವೇರಿ, ಗದಗ, ಬಾಗಲಕೋಟೆ ಮತ್ತು ಕೊಪ್ಪಳ ಜಿಲ್ಲಾ ಪಂಚಾಯತ್‌ಗಳು.
2. ಜಿಲ್ಲಾ ಖಜಾನಾಧಿಕಾರಿಗಳು, ಬೆಳಗಾವಿ, ತುಮಕೂರು, ಹಾವೇರಿ, ಗದಗ, ಬಾಗಲಕೋಟೆ ಮತ್ತು ಕೊಪ್ಪಳ ಜಿಲ್ಲೆಗಳು.
3. ಮಹಾಲೇಖಪಾಲರು, ಬೆಂಗಳೂರು.
4. ನಿರ್ದೇಶಕರು, ರಾಜ್ಯ ಹುಜೂರ್ ಖಜಾನೆ, ಬೆಂಗಳೂರು.
5. ಉಪನಿರ್ದೇಶಕರು, ಖಜಾನೆ ಗಣಕ ಮಾಹಿತಿ ಜಾಲ, ಖನಿಜ ಭವನ, ಬೆಂಗಳೂರು.
6. ಖಜಾನೆಗಳ ಉಪ ನಿರ್ದೇಶಕರು, ಪೋಡಿಯಂ ಬ್ಲಾಕ್, ವಿಶ್ವೇಶ್ವರಯ್ಯ ಟವರ್, ಬೆಂಗಳೂರು.
7. ಮಾನ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂ.ರಾಜ್ ಸಚಿವರ ಆಪ್ತ ಕಾರ್ಯದರ್ಶಿಗಳು, ವಿಧಾನಸೌಧ, ಬೆಂಗಳೂರು.
8. ಸರ್ಕಾರದ ಪ್ರಧಾನ ಕಾರ್ಯದರ್ಶಿ/ಕಾರ್ಯದರ್ಶಿಗಳ ಆಪ್ತ ಕಾರ್ಯದರ್ಶಿಗಳು, ಗ್ರಾ.ಅ.& ಪಂ.ರಾಜ್ ಇಲಾಖೆ.
9. ಸರ್ಕಾರದ ಪ್ರಧಾನ ಕಾರ್ಯದರ್ಶಿಗಳ ಆಪ್ತ ಕಾರ್ಯದರ್ಶಿಗಳು, ಆರ್ಥಿಕ ಇಲಾಖೆ, ವಿಧಾನಸೌಧ, ಬೆಂಗಳೂರು.
10. ಆಂತರಿಕ ಆರ್ಥಿಕ ಸಲಹೆಗಾರರು, ಗ್ರಾ.ಅ. ಮತ್ತು ಪಂ.ರಾಜ್ ಇಲಾಖೆ, ಬೆಂಗಳೂರು.
11. ಸರ್ಕಾರದ ಉಪಕಾರ್ಯದರ್ಶಿ (ಆಡಳಿತ) ಗ್ರಾ.ಅ.ಮತ್ತು ಪಂ.ರಾಜ್ ಇಲಾಖೆ, ಕಂಪ್ಯೂಟರ್ ಸೆಲ್, ಈ ಆದೇಶವನ್ನು ಇಲಾಖೆಯ ವೆಬ್‌ಸೈಟ್‌ನಲ್ಲಿ ಪ್ರಕಟಿಸುವುದು.
12. ರಕ್ಷ ಕಡತಕ್ಕೆ/ಹೆಚ್ಚುವರಿ ಪ್ರತಿ.

ಅನುಬಂಧ

**2013–14 ನೇ ಸಾಲಿನ ಸುವರ್ಣ ಗ್ರಾಮೋದಯ ಯೋಜನೆಯ 2ನೇ ಕಂತಿನ ಅನುದಾನ ಬಿಡುಗಡೆ**

ಸರ್ಕಾರ ಆದೇಶ ಸಂಖ್ಯೆ:ಗ್ರಾಅಪ:35:ಸುಗ್ರಾಯೋ:2013, ದಿನಾಂಕ:11.10.2013

(ರೂ.ಲಕ್ಷಗಳಲ್ಲಿ)

| ಕ್ರ. ಸಂ. | ಜಿಲ್ಲೆ | ಬಂಡವಾಳ ವೆಚ್ಚ | SCP | TSP | ಒಟ್ಟು |
|---|---|---|---|---|---|
| 1 | ಬೆಳಗಾವಿ | 378.60 | 151.32 | 70.08 | 600.00 |
| 2 | ತುಮಕೂರು | 378.60 | 151.32 | 70.08 | 600.00 |
| 3 | ಹಾವೇರಿ | 231.57 | 92.56 | 42.87 | 367.00 |
| 4 | ಗದಗ | 189.30 | 75.66 | 35.04 | 300.00 |
| 5 | ಬಾಗಲಕೋಟೆ | 189.30 | 75.66 | 35.04 | 300.00 |
| 6 | ಕೊಪ್ಪಳ | 189.30 | 75.66 | 35.04 | 300.00 |
| ಒಟ್ಟು | | 1556.67 | 622.18 | 288.15 | 2467.00 |

(ಬೂವನಹಳ್ಳಿ ನಾಗರಾಜ್)
ನಿರ್ದೇಶಕರು (ಸುಗ್ರಾ & ಪಘಅಯೋ) ಹಾಗೂ
ಪದನಿಮಿತ್ತ ಸರ್ಕಾರದ ಉಪ ಕಾರ್ಯದರ್ಶಿ,
ಗ್ರಾಮೀಣಾಭಿವೃದ್ಧಿ ಮತ್ತು ಪಂ.ರಾಜ್ ಇಲಾಖೆ